1	2	3	4
ಅ) ಪ್ರಥಮ	01	2,00,000	2,00,000
ಆ) ದ್ವಿತೀಯ	02	1,00,000	2,00,000
ಇ) ತೃತ್ತೀಯ	03	50,000	1,50,000
ಈ) ಚತುರ್ಥ	04	25,000	1,00,000
ಒಟ್ಟು	**10**	–	**6,50,000**

ಸಹಕಾರ ಸಂಘ ಸಂಸ್ಥೆಗಳು ಮತ್ತು ಸಹಕಾರಿ ಬ್ಯಾಂಕುಗಳ ಆಡಳಿತ ಮಂಡಳಿಗೆ ನಾಮ ನಿರ್ದೇಶನ ಮಾಡುವ ಬಗ್ಗೆ

3191 (3725) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪ್ರಾಥಮಿಕ ಸಹಕಾರಿ ಸಂಘ ಸಂಸ್ಥೆಗಳು ಮತ್ತು ಸಹಕಾರಿ ಬ್ಯಾಂಕುಗಳ ಆಸ್ತಿ ಜವಾಬ್ದಾರಿ ತಃಖ್ತೆಗಳ ಪ್ರಕಾರ ಸರ್ಕಾರದಿಂದ ಯಾವುದೇ ರೀತಿಯ ನೆರವು ಇಲ್ಲದಿದ್ದಲ್ಲಿ, ಅಂತಹ ಸಹಕಾರಿ ಸಂಸ್ಥೆಗಳ ಮತ್ತು ಬ್ಯಾಂಕುಗಳ ಆಡಳಿತ ಮಂಡಳಿಗೆ ಸರ್ಕಾರವು ನಾಮನಿರ್ದೇಶನ ಸದಸ್ಯರನ್ನು ನೇಮಕ ಮಾಡುವ ಅಧಿಕಾರ ಇದೆಯೇ?

ಆ) ಅಂತಹ ಸಹಕಾರಿ ಸಂಘಗಳಿಗೆ ಮತ್ತು ಸಹಕಾರಿ ಬ್ಯಾಂಕುಗಳಿಗೆ ಸರ್ಕಾರ ನಾಮನಿರ್ದೇಶನ ಮಾಡಿರುವುದಿಲ್ಲವೇ? ವಿವರ ನೀಡುವುದು.

ಇ) ಈ ರೀತಿ ನೇಮಕ ಮಾಡಿರುವುದಕ್ಕೆ ಕಾರಣಗಳೇನು?

ಶ್ರೀ ಹೆಚ್. ವಿಶ್ವನಾಥ (ಸಹಕಾರ ಸಚಿವರು)

ಅ) ಇಲ್ಲ.

ಆ) ಇಲ್ಲ

ಇ) ಅನ್ವಯಿಸುವುದಿಲ್ಲ.

ಬೆಂಗಳೂರು ನಗರದಲ್ಲಿ ಅಡುಗೆ ಅನಿಲ ಬಳಕೆದಾರರಿಗೆ ಸೀಮೆ ಎಣ್ಣೆ ವಿತರಿಸುವುದು

3193 (3985) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಅಡುಗೆ ಅನಿಲ ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು?

ಆ) ಅಡುಗೆ ಅನಿಲ ಹೊಂದಿರುವವರಿಗೆ ಪಡಿತರ ಚೀಟಿಯಲ್ಲಿ ಸೀಮೆ ಎಣ್ಣೆಯನ್ನು ನೀಡಲಾಗುತ್ತಿದೆಯೇ;

ಇ) ಇಲ್ಲದಿದ್ದಲ್ಲಿ, ಕಾರಣಗಳೇನು;

ಈ) ಅಡುಗೆ ಅನಿಲದ ಸರಬರಾಜು ಸರಿಯಾಗಿಲ್ಲದೇ ಇರುವುದರಿಂದ ಅಡಿಗೆ ಅನಿಲ ಹೊಂದಿರುವ ಪಡಿತರ ಚೀಟಿದಾರರಿಗೂ ಸೀಮೆಎಣ್ಣೆ ವಿತರಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ರಾಮಲಿಂಗಾರೆಡ್ಡಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಬೆಂಗಳೂರು ನಗರ ಪ್ರದೇಶದಲ್ಲಿ 10,44,719 ಅಡಿಗೆ ಅನಿಲ ಸಂಪರ್ಕಗಳನ್ನು ತೈಲ ಕಂಪನಿಗಳಿಂದ ನೀಡಲಾಗಿದೆ.

ಆ) – ಇಲ್ಲ –

ಇ) ಕೇಂದ್ರ ಸರ್ಕಾರದಿಂದ ಪ್ರತಿ ವರ್ಷವೂ ರಾಜ್ಯಕ್ಕೆ ನಿಗದಿ ಪಡಿಸುವ ಸೀಮೇಎಣ್ಣೆಯ ಪ್ರಮಾಣವು ಗಣನೀಯವಾಗಿ ಕಡಿಮೆ ಆಗುತ್ತಿರುವುದರಿಂದ ಮತ್ತು ಬರೀ ಸೀಮೆಎಣ್ಣೆ ಮೇಲೆ ಅವಲಂಬಿತರಾಗಿರುವ ಗ್ರಾಹಕರಿಗೆ ಸೀಮೆಎಣ್ಣೆಯನ್ನು ಪೂರೈಸಲು ಅನಿಲ ಸಂಪರ್ಕ ಹೊಂದಿರುವ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆ ವಿತರಣೆಯನ್ನು ಸ್ಥಗಿತಗೊಳಿಸಲಾಗಿದೆ.

ಈ) ಅಡಿಗೆ ಅನಿಲದ ಸರಬರಾಜಿನಲ್ಲಿ ಯಾವುದೇ ಕೊರತೆ ಇರುವುದಿಲ್ಲ. ಹೊಸ ಸಂಪರ್ಕಗಳಿಗೆ ಕಾಯುವಿಕೆ ಇರುವುದಿಲ್ಲ. ಆದ್ದರಿಂದ ಅನಿಲ ಸಂಪರ್ಕ ಹೊಂದಿರುವ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ರಾಜ್ಯದಲ್ಲಿ ಅಂತ್ಯೋದಯ ಅನ್ನ ಯೋಜನೆಯ ಫಲಾನುಭವಿಗಳ ಮಾಹಿತಿ

3194 (3694) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಅಂತ್ಯೋದಯ ಅನ್ನ ಯೋಜನೆಯ ಫಲಾನುಭವಿಗಳು ಇರುವರು; ಜಿಲ್ಲಾವಾರು ಮಾಹಿತಿ ನೀಡುವುದು.

ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಅಂತ್ಯೋದಯ ಅನ್ನ ಯೋಜನೆಯ ಫಲಾನುಭವಿಗಳು ಇರುವವರು;

ಇ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಅಂತ್ಯೋದಯ ಅನ್ನ ಯೋಜನೆಯ ಫಲಾನುಭವಿಗಳು ಇದ್ದರೂ ಕೂಡ ಇನ್ನೂ ಅವರಿಗೆ ಈ ಸೌಲಭ್ಯ ಒದಗಿಸದೆ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಆ ಅರ್ಹ ಫಲಾನುಭವಿಗಳಿಗೆ ಅಂತ್ಯೋದಯ ಅನ್ನ ಯೋಜನೆಯ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

ಉ) ರಾಜ್ಯದಲ್ಲಿ ಈ ವರ್ಷ ಎಷ್ಟು ಅಂತ್ಯೋದಯ ಅನ್ನ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಿ ಸೌಲಭ್ಯ ಒದಗಿಸಲು ನಿರ್ಣಯಿಸಲಾಗಿದೆ?

ಶ್ರೀ ರಾಮಲಿಂಗಾರೆಡ್ಡಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) 49700

ಜಿಲ್ಲಾವಾರು ಮಾಹಿತಿ ಕೆಳಕಂಡಂತಿದೆ.

ಕ್ರ ಸಂ.	ಜಿಲ್ಲೆಯ ಹೆಸರು	ಅಂತ್ಯೋದಯ ಅನ್ನ ಪಡಿತರ ಚೀಟಿಗಳು
1.	ಬೆಂಗಳೂರು (ನಗರ)	7915
2.	ಬೆಂಗಳೂರು (ಗ್ರಾಮಾಂತರ)	12719
3.	ಬಾಗಲಕೋಟೆ	19933
4.	ಬೆಳಗಾಂ	37925
5.	ಬಳ್ಳಾರಿ	27744
6.	ಬೀದರ್	20381